**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಹೊನ್ನಾವರ**

**ಸಿ. ಸಿ. ನಂ. 93/2020**

**ಚಾ.ಸಾಃ 12, ಪ್ರಾ.ಸಾಃ 07**

| | |
|---|---|
| ಸಾಕ್ಷಿದಾರನ ಹೆಸರು | ಶ್ರೀಮತಿ ಸಾವಿತ್ರಿ ನಾಯ್ಕ |
| ಗಂಡನ ಹೆಸರು | ಆನಂದು ನಾಯ್ಕ |
| ವಯಸ್ಸು | 53 ವರ್ಷಗಳು |
| ಉದ್ಯೋಗ | ಆರಕ್ಷಕ ಉಪ-ನಿರೀಕ್ಷಕರು, ಕುಮಟಾ ಪೋಲೀಸ್ ಠಾಣೆ |
| ವಾಸ್ತವ್ಯ | ಕುಮಟಾ |

**ಸಾಕ್ಷಿಯನ್ನು ದಿನಾಂಕಃ 10-10-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಅಗಸ್ಟ-2018 ರಿಂದ ಮೇ-2022 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕಳಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕ 17-07-2020 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಸಂಜೆ 04-30 ಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.145/2020 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-11 ಎಂದು, ಸಾಕ್ಷಿ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು.

ದಿನಾಂಕ 18-07-2020 ರಂದು ಬೆಳಿಗ್ಗೆ 10-30 ರಿಂದ 11-15 ರ ಸಮಯಕ್ಕೆ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪಂಚರ ಸಮಕ್ಷಮ ಸ್ಥಳ ಪಂಚನಾಮೆ ತಯಾರಿಸಿ ಪೋಟೋ ತೆಗೆಸಿರುತ್ತೇನೆ. ಸದರಿ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಫೋಟೋಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಗಿದೆ.

ಅದೇ ದಿನ ಚಾಸಾ-6 ಮತ್ತು 7 ರವರ ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 31-07-2020 ರಂದು ಸಂಜೆ 04-00 ಗಂಟೆ ಸಮಯಕ್ಕೆ ಹೊನ್ನಾವರ ಠಾಣೆಯ ಸಿಪಿಐ ಚಾಸಾ-10 ರವರು 2 ಜನ ಆರೋಪಿತರನ್ನು ಹಿಡಿದು ವಿಚಾರಿಸಿದಾಗ ಅವರು ಈ ಪ್ರಕರಣದಲ್ಲಿಯೂ ಸಹ ಕಳ್ಳತನ ಮಾಡಿರುವುದಾಗಿ ಸದರಿ ಪ್ರಕರಣದಲ್ಲಿ ಸ್ವ ಇಚ್ಛಾ ಹೇಳಿಕೆ ನೀಡಿರುತ್ತಾರೆ.

ದಿನಾಂಕ 05-08-2020 ರಂದು ಚಾಸಾ-1, 6 ಮತ್ತು 7 ರವರ ಮರು ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 05-11-2020 ರಂದು ಚಾಸಾ-9 ಮತ್ತು 10 ರವರ ಹೇಳಿಕೆ ಪಡೆದಿರುತ್ತೇನೆ ಮತ್ತು ಅವರಿಂದ ಕಲಂ 65-ಬಿ ಪ್ರಮಾಣಪತ್ರ ಪಡೆದಿರುತ್ತೇನೆ.

ಈ ಪ್ರಕರಣದ ಸಂಪೂರ್ಣ ತನಿಖೆಯು ಠಾಣಾ ಮೊಕದ್ದಮೆ 67/2020 ರಲ್ಲಿ ಮುಕ್ತಾಯಗೊಂಡಿದ್ದು ಮತ್ತು ಈ ಪ್ರಕರಣದ ಕಳುವು ಮಾಲನ್ನ ಸದರಿ ಪ್ರಕರಣದಲ್ಲಿ ಜಪ್ತುಪಡಿಸಿಕೊಂಡಿದ್ದರಿಂದ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರಿಂದಃ</u>**

ಸ್ಥಳಕ್ಕೆ ಹೋದ ನಂತರ ಪಂಚರನ್ನು ಸ್ಥಳಕ್ಕೆ ಬರಮಾಡಿಕೊಂಡಿರುತ್ತೇನೆ. ಅವರಿಗೆ ನೋಟೀಸು ನೀಡಿಲ್ಲ, ಮೌಖಿಕವಾಗಿ ಕರೆಸಿಕೊಂಡಿರುತ್ತೇನೆ. ಪಂಚನಾಮೆಯನ್ನು ಚಾಸಾ-10 ರವರ ಮೂಲಕ ಬರೆಸಿರುತ್ತೇನೆ. ಪಂಚನಾಮೆ ಬರೆಯಲು ನಾನೇ ಮಾಹಿತಿ ನೀಡಿರುತ್ತೇನೆ. ಪಂಚನಾಮೆಯ ಕಾಲಕ್ಕೆ ಶ್ವಾನದಳದವರನ್ನು ಕರೆಸಿರಲಿಲ್ಲ. ನಾನು ಸ್ಥಳಕ್ಕೆ ಹೋಗಿ ಯಾವುದೇ ಪಂಚನಾಮೆ ಮಾಡಿಲ್ಲ, ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಮರು ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಸರಿಯಾದ ರೀತಿಯಲ್ಲಿ ತನಿಖೆ ಮಾಡದೇ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**